**All India Radio: Bangalore**
**National Bulletin In Kannada**
**15.08.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.08.2026  1.10 p.m.**

**<><><><>**

ಮುಖ್ಯಾಂಶಗಳು

1. ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವುದು ಭಾರತದ ಗುರಿಯಾಗಿದೆ - ಸ್ವಾತಂತ್ರ್ಯ ದಿನದ ಭಾಷಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದನೆ
2. ಜಮ್ಮು-ಕಾಶ್ಮೀರ, ಲಡಾಖ್ ರಾಷ್ಟ್ರದ ಅವಿಭಾಜ್ಯ ಅಂಗ- ಭಾರತ ಪುನರುಚ್ಚಾರ
3. ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗಾಗಿ ಹಲವು ನೂತನ ಯೋಜನೆಗಳು ಶೀಘ್ರ ಜಾರಿ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
4. ಟೆಸ್ಟ್ ಕ್ರಿಕೆಟ್: ಭಾರತ-ಶ್ರೀಲಂಕಾ ನಡುವಿನ ಪಂದ್ಯ ಪ್ರಗತಿಯಲ್ಲಿ

<><><><>

ರಾಷ್ಟ್ರಾದ್ಯಂತ ಇಂದು ೮೦ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ದೆಹಲಿಯ ಐತಿಹಾಸಿಕ ಕೆಂಪುಕೋಟೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಭಾರತೀಯ ವಾಯುಪಡೆಯ ಎರಡು ಎಂಐ-೧೭ ಹೆಲಿಕಾಪ್ಟರ್‌ಗಳು ಪುಷ್ಪವೃಷ್ಟಿ ಮಾಡಿದವು. ೨೧ ಕುಶಲತೋಪುಗಳ ಗೌರವ ವಂದನೆ ಸಲ್ಲಿಸಲಾಯಿತು. ಬಳಿಕ ದೇಶವನ್ನುದ್ದೇಶಿಸಿ ಭಾಷಣ ಮಾಡಿದ ಪ್ರಧಾನಿ ಅವರು, ಸ್ವಾತಂತ್ರ್ಯದ ನಂತರ ಮೊದಲ ಬಾರಿಗೆ ಕೆಂಪು ಕೋಟೆಯಿಂದ ವಂದೇ ಮಾತರಂ ಪ್ರತಿಧ್ವನಿಸುತ್ತಿದೆ ಎಂದು ಹೇಳಿದರು. ಇತ್ತೀಚಿನ ದಿನಗಳಲ್ಲಿ, ದೇಶದ ಕೆಲವು ಭಾಗಗಳು ತೀವ್ರ ಪ್ರವಾಹ ಮತ್ತು ಭೂಕುಸಿತಗಳನ್ನು ಕಂಡಿದ್ದು, ಅನೇಕ ಕುಟುಂಬಗಳ ಮೇಲೆ ಪರಿಣಾಮ ಬೀರಿವೆ. ಇಡೀ ರಾಷ್ಟ್ರವು ಅವರ ಜೊತೆ ದೃಢವಾಗಿ ನಿಲ್ಲುತ್ತದೆ ಎಂದರು. ಒಂದು ರಾಷ್ಟ್ರವು ತನ್ನ ದೃಢನಿಶ್ಚಯ ಮತ್ತು ಸಾಮರ್ಥ್ಯಗಳ ಬಲದ ಮೇಲೆ ಮುಂದುವರಿಯುವಾಗ ಅದು ಶ್ರೇಷ್ಠವಾಗುತ್ತದೆ. ಕಳೆದ ಹನ್ನೆರಡು ವರ್ಷಗಳಲ್ಲಿ, ದೇಶದ ಕೋಟ್ಯಂತರ ನಾಗರಿಕರು ತಮ್ಮ ದೃಢನಿಶ್ಚಯ ಮತ್ತು ಸಮರ್ಪಣಾ ಮನೋಭಾವದಿಂದ ದೇಶವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಾಧ್ಯವಿರುವ ಎಲ್ಲ

ಪ್ರಯತ್ನಗಳನ್ನು ಮಾಡಿದ್ದಾರೆ. ಇದರಿಂದಾಗಿ ೨೫ ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಒಂದು ಕಾಲದಲ್ಲಿ ದುರ್ಬಲ ಐದು ಆರ್ಥಿಕತೆಗಳಲ್ಲಿ ಒಂದಾಗಿದ್ದ ಭಾರತ, ಈಗ ವಿಶ್ವದ ಪ್ರಮುಖ ಮತ್ತು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿ ಹೊರಹೊಮ್ಮಿದೆ. ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವುದು ಭಾರತದ ಗುರಿಯಾಗಿದೆ ಎಂದು ಹೇಳಿದರು. ಕಳೆದ ೧೨ ವರ್ಷಗಳಲ್ಲಿ, ರಕ್ಷಣಾ ಉತ್ಪಾದನೆಯು ಸುಮಾರು ನಾಲ್ಕು ಪಟ್ಟು, ಖಾದಿ ಮತ್ತು ಗ್ರಾಮೋದ್ಯೋಗ ಉತ್ಪಾದನೆಯು ಐದು ಪಟ್ಟು, ಎಲೆಕ್ಟ್ರಾನಿಕ್ ಉತ್ಪಾದನೆಯು ಸುಮಾರು ಏಳು ಪಟ್ಟು, ಆಧುನಿಕ ರೈಲ್ವೆ ಬೋಗಿ ಉತ್ಪಾದನೆಯು ೨೧ ಪಟ್ಟು ಮತ್ತು ಮೊಬೈಲ್ ಫೋನ್ ಉತ್ಪಾದನೆಯು ೩೩ ಪಟ್ಟು ಹೆಚ್ಚಾಗಿದೆ ಎಂದು ತಿಳಿಸಿದರು. ಇಂಟರ್ನೆಟ್ ಬಳಕೆದಾರರು ಸುಮಾರು ನಾಲ್ಕು ಪಟ್ಟು ಮತ್ತು ಡಿಜಿಟಲ್ ವಹಿವಾಟುಗಳು ೧೦೦ ಪಟ್ಟು ಹೆಚ್ಚಾಗಿದೆ. ಕೇಂದ್ರ ಸರ್ಕಾರ, ಸಾಮಾನ್ಯ ಜನರ ಕಲ್ಯಾಣದ ಕಡೆಗೆ ಕೆಲಸ ಮಾಡುತ್ತಿದೆ ಎಂದ ಅವರು, ಇಂಧನ ಭದ್ರತೆ ಇಂದಿನ ಅಗತ್ಯವಾಗಿದೆ. ಅದಕ್ಕಾಗಿಯೇ ನಾವು ಈಗಾಗಲೇ ಈ ದಿಕ್ಕಿನಲ್ಲಿ ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ೨೦೪೭ ರ ವೇಳೆಗೆ ೧೦೦ ಗಿಗಾವ್ಯಾಟ್ ಪರಮಾಣು ವಿದ್ಯುತ್ ಸಾಮರ್ಥ್ಯದ ಗುರಿಯೊಂದಿಗೆ ಸರ್ಕಾರ ಮುಂದುವರಿಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ (೨೨ ಸೆಕೆಂಡ್‌ಗಳು)

ರಾಷ್ಟ್ರೀಯ ಗೀತೆ ವಂದೇ ಮಾತರಂನ ೧೫೦ ವರ್ಷಗಳ ಪರಂಪರೆಯನ್ನು ಸ್ಮರಿಸುವುದು ಹಾಗೂ ೨೦೪೭ರ ವಿಕಸಿತ ಭಾರತದ ಪಯಣದಲ್ಲಿ ಯುವಶಕ್ತಿಯ ಕೊಡುಗೆಯನ್ನು ಬಿಂಬಿಸುವುದು ಈ ಬಾರಿಯ ವಿಶೇಷತೆಯಾಗಿದೆ. ಇದೇ ಮೊದಲ ಬಾರಿಗೆ ಕೆಂಪುಕೋಟೆಯ ಸ್ವಾತಂತ್ರ್ಯ ದಿನಾಚರಣೆಯಲ್ಲಿ ವಂದೇ ಮಾತರಂ ಗಾಯನ ಮಾಡಲಾಯಿತು. ಎನ್‌ಸಿಸಿ ಹಾಗೂ ಮೈ ಭಾರತ್ ಸ್ವಯಂಸೇವಕರು ವಂದೇ ಮಾತರಂ ಹಾಡಿದರು. ಭಾರತೀಯ ಸೇನೆ, ನೌಕಾಪಡೆ ಮತ್ತು ವಾಯುಪಡೆಯ ೨ ಸಾವಿರದ ೫೦೦ ಕೆಡೆಟ್‌ಗಳು ಹಾಗೂ ಮೈ ಭಾರತ್ ಸ್ವಯಂಸೇವಕರು ಸಮಾರಂಭದಲ್ಲಿ ಭಾಗವಹಿಸಿದ್ದರು. ವಿಶ್ವಕರ್ಮ ಯೋಜನೆಯ ಕುಶಲಕರ್ಮಿಗಳು, ಮುದ್ರಾ ಯೋಜನೆಯ ಮಹಿಳಾ ಉದ್ಯಮಿಗಳು, ಪಿಎಂ ಸ್ವ-ನಿಧಿ ಯೋಜನೆಯ ಬೀದಿಬದಿ ವ್ಯಾಪಾರಿಗಳು ಹಾಗೂ ಭಾರತ್ ಟ್ಯಾಕ್ಸಿಯ ಚಾಲಕರು ಸೇರಿದಂತೆ ವಿವಿಧ ಕ್ಷೇತ್ರಗಳ ಸುಮಾರು ೫ ಸಾವಿರ ಮಂದಿ ವಿಶೇಷ ಅತಿಥಿಗಳಾಗಿ ಪಾಲ್ಗೊಂಡಿದ್ದರು.

<><><><>

ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಭಾರತದ ಅವಿಭಾಜ್ಯ ಅಂಗ ಎಂದು ಭಾರತ ಪುನರುಚ್ಚರಿಸಿದೆ. ನವದೆಹಲಿಯಲ್ಲಿಂದು ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರಸ್ತುತ ನಡೆಯುತ್ತಿರುವ ದೌರ್ಜನ್ಯಗಳು ಹಾಗೂ ಗಡಿಯಾಚೆಗಿನ ಭಯೋತ್ಪಾದನೆಗೆ ಆ ಪ್ರದೇಶದ ಬಳಕೆಯು ಅಂತಾರಾಷ್ಟ್ರೀಯ ಸಮುದಾಯ ಕಳವಳಪಡಬೇಕಾದ ವಿಷಯವಾಗಿದೆ ಎಂದು ಹೇಳಿದರು. ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಕಳೆದ ಕೆಲವು ತಿಂಗಳಲ್ಲಿ ಭಾರತ ಅಫ್ಘಾನಿಸ್ತಾನದೊಂದಿಗೆ ಹಲವಾರು ಒಪ್ಪಂದಗಳನ್ನು ಮಾಡಿಕೊಂಡಿದೆ. ಅಫ್ಘಾನಿಸ್ತಾನದ ಅನೇಕ ಸಚಿವರು ಭಾರತಕ್ಕೆ ಭೇಟಿ ನೀಡಿದ್ದಾರೆ. ಇದು ಅಭಿವೃದ್ಧಿ, ಸಹಕಾರ, ವ್ಯಾಪಾರ, ಸಂಪರ್ಕ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪಾಲುದಾರಿಕೆಯನ್ನು ಬಲಪಡಿಸಲು ಕಾರಣವಾಗಿದೆ ಎಂದು ತಿಳಿಸಿದರು. ಡೀಸೆಲ್ ಪೂರೈಕೆಗಾಗಿ ಭಾರತ ಬಾಂಗ್ಲಾದೇಶದೊಂದಿಗೆ ನಿರಂತರ ಒಪ್ಪಂದವನ್ನು ಹೊಂದಿದೆ. ಭಾರತದ ಸ್ವಂತ ಅವಶ್ಯಕತೆಗಳು, ಸಂಸ್ಕರಣಾ ಸಾಮರ್ಥ್ಯ ಮತ್ತು ದೇಶದಲ್ಲಿ ಡೀಸೆಲ್ ಲಭ್ಯತೆ ಗಮನದಲ್ಲಿಟ್ಟುಕೊಂಡು ಹೆಚ್ಚುವರಿ ಡೀಸೆಲ್‌ಗಾಗಿ ಮನವಿಯನ್ನು ಪರಿಶೀಲಿಸಲಾಗುವುದು ಎಂದು ರಣಧೀರ್ ಜೈಸ್ವಾಲ್ ಹೇಳಿದರು.

<><><><>

'ಯುವ ಕರ್ನಾಟಕ-ನವ ಭಾರತ' ಎಂಬ ಧ್ಯೇಯವಾಕ್ಯದೊಂದಿಗೆ ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗಾಗಿ ಹಲವು ನೂತನ ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ೮೦ನೇ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಬೆಂಗಳೂರಿನ ಮಾಣೆಕ್ ಶಾ ಪರೇಡ್ ಮೈದಾನದಲ್ಲಿಂದು ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಸರ್ಕಾರಿ ವಲಯದಲ್ಲಿ ಖಾಲಿ ಇರುವ ೭೨ ಸಾವಿರ ಪ್ರಮುಖ ಹುದ್ದೆಗಳನ್ನು ಮುಂದಿನ ಆರು ತಿಂಗಳಲ್ಲಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ವೇಗಗೊಳಿಸಲಾಗುವುದು ಎಂದು ತಿಳಿಸಿದರು. ಖಾಸಗಿ ಉದ್ಯೋಗಾವಕಾಶಗಳನ್ನು ಯುವಜನರಿಗೆ ತಲುಪಿಸಲು 'ಯುವ ಉದ್ಯೋಗ ಸೇತು' ತಂತ್ರಾಂಶ ಹಾಗೂ ಹಿಂದುಳಿದ ೧೦ ಜಿಲ್ಲೆಗಳಲ್ಲಿ ನೂತನ ಉದ್ಯೋಗ ಸೃಷ್ಟಿಸುವ ಉದ್ಯಮಿಗಳಿಗೆ ಪ್ರತಿ ಉದ್ಯೋಗಕ್ಕೆ ತಿಂಗಳಿಗೆ ೨ ಸಾವಿರದ ೫೦೦ ರೂಪಾಯಿ ಪ್ರೋತ್ಸಾಹಧನ ನೀಡುವ 'ಉದ್ಯೋಗ ನಿಧಿ' ಯೋಜನೆಯನ್ನು ಜಾರಿಗೆ ತರಲಾಗುವುದು ಎಂದು ಮಾಹಿತಿ ನೀಡಿದರು. ಶೈಕ್ಷಣಿಕ ಮತ್ತು

ತಾಂತ್ರಿಕ ಕ್ಷೇತ್ರದಲ್ಲಿ ಬೃಹತ್ ಬದಲಾವಣೆ ತರುವ ನಿಟ್ಟಿನಲ್ಲಿ, ರಾಜ್ಯದ ಶಾಲೆಗಳಲ್ಲಿ ೬ನೇ ತರಗತಿಯಿಂದಲೇ ಎಐ ಶಿಕ್ಷಣ ಪರಿಚಯಿಸುವ 'ಎಐ ಅಕ್ಷರ ಅಭಿಯಾನ' ಮತ್ತು ಉಚಿತ 'ಕೋಡಿಂಗ್ ಗುರುಕುಲ' ಯೋಜನೆಗಳಿಗೆ ಚಾಲನೆ ನೀಡಲಾಗಿದೆ ಎಂದು ಅವರು ಹೇಳಿದರು. ಜೊತೆಗೆ ಬೆಂಗಳೂರಿನಲ್ಲಿ ದೇಶದ ಮೊದಲ ಸರ್ಕಾರಿ ಎಐ ವಿಶ್ವವಿದ್ಯಾಲಯ ಸ್ಥಾಪನೆ, ಒಂದು ಸಾವಿರ ಸರ್ಕಾರಿ ಶಾಲೆಗಳನ್ನು 'ಕರ್ನಾಟಕ ಪಬ್ಲಿಕ್ ಶಾಲೆ'ಗಳಾಗಿ ಮೇಲ್ದರ್ಜೆಗೇರಿಸುವುದು ಮತ್ತು ಗ್ರಾಮೀಣ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳ ಪ್ರವೇಶದಲ್ಲಿ ಶೇಕಡ ೭.೫ರಷ್ಟು ಒಳಮೀಸಲಾತಿ ಕಲ್ಪಿಸುವ 'ವಿದ್ಯಾರ್ಥಿ ಸಹಾಯ ಹಸ್ತ' ಯೋಜನೆಯನ್ನು ಇದೇ ವೇಳೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಕಟಿಸಿದರು. ಕೃಷಿ ಕ್ಷೇತ್ರಕ್ಕೆ ಆಧುನಿಕ ತಂತ್ರಜ್ಞಾನ ಜೋಡಿಸಲು 'ಮುಖ್ಯಮಂತ್ರಿ ರೈತ ಚೈತನ್ಯ' ಹಾಗೂ ೩ ಎಕರೆವರೆಗಿನ ಸಣ್ಣ ರೈತರಿಗೆ ಕೃಷಿ ಯಂತ್ರೋಪಕರಣಗಳ ಬಾಡಿಗೆ ವೆಚ್ಚದಲ್ಲಿ ಶೇಕಡ ೫೦ ರಷ್ಟು ಸಬ್ಸಿಡಿ ನೀಡುವ 'ರೈತ ಮಿತ್ರ' ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ ಎಂದು ಅವರು ತಿಳಿಸಿದರು. ಬಳಿಕ ನಡೆದ ಪಥಸಂಚಲನದಲ್ಲಿ ವಿವಿಧ ಪಡೆಗಳ ತುಕಡಿ ಹಾಗೂ ಶಾಲಾ ಮಕ್ಕಳ ತಂಡಗಳಿಂದ ಕವಾಯತು ನಡೆಯಿತು. ಇದಕ್ಕೂ ಮುನ್ನ ಮುಖ್ಯಮಂತ್ರಿಗಳು ತೆರೆದ ವಾಹನದಲ್ಲಿ ತೆರಳಿ ಗೌರವ ವಂದನೆ ಸ್ವೀಕರಿಸಿದರು. ಉತ್ಸವದ ಭಾಗವಾಗಿ ೮೦೦ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

<><><>

ಬೆಂಗಳೂರಿನ ಆಕಾಶವಾಣಿಯಲ್ಲಿ ೮೦ನೇ ಸ್ವಾತಂತ್ರ್ಯೋತ್ಸವವನ್ನು ಉತ್ಸಾಹದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಕಚೇರಿ ಮತ್ತು ಕ್ಲಸ್ಟರ್ ಮುಖ್ಯಸ್ಥರಾದ ಉಪ ಮಹಾನಿರ್ದೇಶಕ ಸಂಜೀವ್ ಕೆ.ಪಿ., ಸಹಾಯಕ ನಿರ್ದೇಶಕರು ಮತ್ತು ಕಾರ್ಯಕ್ರಮ ಮುಖ್ಯಸ್ಥರಾದ ನೂತನ್ ಕದಮ್, ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗದ ಮುಖ್ಯಸ್ಥರು ಹಾಗೂ ಸಹಾಯಕ ನಿರ್ದೇಶಕರಾದ ಸುಹಾಸ್ ಆರ್. ಮತ್ತು ಹಿರಿಯ ಆಡಳಿತ ಅಧಿಕಾರಿ ಎಂ.ಎನ್.ಪ್ರಸಾದ್ ಉಪಸ್ಥಿತರಿದ್ದರು.

<><><>

ನೀಟ್ ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ತನಿಖೆ ಸಮಯದಲ್ಲಿ ಹೊಸ ಪುರಾವೆಗಳು ಹೊರಬಂದಿರುವುದರಿಂದ, ದೆಹಲಿಯ ವಿಶೇಷ ತ್ವರಿತಗತಿ ನ್ಯಾಯಾಲಯವು ಹೆಚ್ಚಿನ ತನಿಖೆ

ನಡೆಸಲು ಕೇಂದ್ರೀಯ ತನಿಖಾ ದಳ-ಸಿಬಿಐ ಗೆ ಅನುಮತಿ ನೀಡಿದೆ. ನೀಟ್ ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಈಗಾಗಲೇ ಆರೋಪಪಟ್ಟಿ ಸಲ್ಲಿಸಲಾಗಿರುವ ೧೩ ಆರೋಪಿಗಳನ್ನು ಹೊರತುಪಡಿಸಿ, ಇತರ ಆರೋಪಿಗಳ ವಿರುದ್ಧದ ತನಿಖೆಯನ್ನು ಮುಕ್ತವಾಗಿಡಲು ಸಿಬಿಐ ಅನುಮತಿ ಕೋರಿದೆ. ಸಿಎಫ್ಎಸ್ಎಲ್ ವರದಿಗಳನ್ನು ವಿಶ್ಲೇಷಿಸಿದ ನಂತರ, ಕೆಲವು ಡಿಜಿಟಲ್ ಪುರಾವೆಗಳು ಸಿಕ್ಕಿದ್ದು, ಇದರಿಂದಾಗಿ ಹೆಚ್ಚಿನ ತಜ್ಞರ ಅಭಿಪ್ರಾಯಗಳನ್ನು ಪಡೆಯುವುದು ಅಗತ್ಯವಾಗಿದೆ ಎಂದು ಸಿಬಿಐ ತಿಳಿಸಿದೆ.

<><><><>

ಭಾರತ ಮತ್ತು ಶ್ರೀಲಂಕಾ ನಡುವಿನ ಎರಡು ಪಂದ್ಯಗಳ ಸರಣಿಯ ಮೊದಲ ಟೆಸ್ಟ್ ಪಂದ್ಯ ಇಂದು ಶ್ರೀಲಂಕಾದ ಗಾಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಪ್ರಗತಿಯಲ್ಲಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ, ೧ ವಿಕೆಟ್ ನಷ್ಟಕ್ಕೆ ೧೦೧ ರನ್ ಮಾಡಿ ಆಡುತ್ತಿದ್ದು, ಪ್ರಸ್ತುತ, ಮಳೆಯ ಕಾರಣ, ಪಂದ್ಯ ಸ್ಥಗಿತಗೊಂಡಿದೆ. ಭಾರತೀಯ ಪುರುಷರ ತಂಡ, ಐತಿಹಾಸಿಕ ೬೦೦ನೇ ಟೆಸ್ಟ್ ಪಂದ್ಯವನ್ನು ಆಡುತ್ತಿದೆ. ಇಂಗ್ಲೆಂಡ್ ಮತ್ತು ಆಸ್ಟ್ರೇಲಿಯಾ ನಂತರ ಆ ಮೈಲಿಗಲ್ಲನ್ನು ತಲುಪಿದ ಮೂರನೇ ತಂಡವಾಗಿದೆ.

<><><><>

ಯುಜಿಸಿ-ಎನ್ಇಟಿ, ಸಿಎಸ್ಐಆರ್-ಎನ್ಇಟಿ, ಐಸಿಎಆರ್ ಎಐಇಇಎ ಪಿಜಿ, ಎಐಸಿಇ ಪಿಹೆಚ್‌ಡಿ ೨೦೨೬ ರ ತಾತ್ಕಾಲಿಕ ಉತ್ತರ ಕೀಗಳನ್ನು ನಾಳೆ ಪ್ರಕಟಿಸಲಾಗುವುದು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ- ಎನ್‌ಟಿಎ ಘೋಷಿಸಿದೆ. ಪರೀಕ್ಷೆಗಳು ಮತ್ತು ಉತ್ತರ ಕೀಗಳಿಗೆ ಸಂಬಂಧಿಸಿದಂತೆ ಸಂಸ್ಥೆಯ ಅಧಿಕೃತ ಮಾಹಿತಿಯನ್ನು ಮಾತ್ರ ಅವಲಂಬಿಸುವಂತೆ ಅಭ್ಯರ್ಥಿಗಳಿಗೆ ಎನ್‌ಟಿಎ ಸಲಹೆ ನೀಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>